Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

KLS/VDIT/636/2021-22 Date 27-01-2022

**ಪತ್ರಿಕಾ ಪ್ರಕಟಣೆ:**

## ವಿದ್ಯಾರ್ಥಿಗಳಿಗಾಗಿ ಅಗ್ನಿಶಾಮಕ ಪ್ರಾತ್ಯಕ್ಷಿಕೆ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ, ಹಳಿಯಾಳದ ಇಲೆಕ್ಟ್ರಿಕಲ್ ಇಂಜನಿಯರಿಂಗ್ ವಿಭಾಗದ ವಿದ್ಯಾರ್ಥಿಗಳು ಜನವರಿ 25 ರಂದು ಸ್ಥಳೀಯ ಅಗ್ನಿಶಾಮಕ ಠಾಣೆಗೆ ಭೇಟಿ ನೀಡಿ ಅಗ್ನಿಶಾಮಕ ಕಾರ್ಯಾಚರಣೆಯ ಕುರಿತು ಸಮಗ್ರ ಪ್ರಾಯೋಗಿಕ ಮಾಹಿತಿ ಪಡೆದುಕೊಂಡರು.

ಹಳಿಯಾಳ ಅಗ್ನಿಶಾಮಕ ಠಾಣೆಯ ಅಧಿಕಾರಿಗಳಾದ ಶ್ರೀ. ಎಸ್ ಎಸ್ ಲಕ್ಷ್ಮೇಶ್ವರ್ ಅವರು ವಿದ್ಯಾರ್ಥಿಗನ್ನುದ್ದೇಶಿಸಿ ಮಾತನಾಡುತ್ತ ಬೆಂಕಿ ಅವಘಡದ ಸಮಯದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾಹಿತಿ ನೀಡಿದರು. ಮತ್ತೊಬ್ಬ ಅಧಿಕಾರಿಗಳಾದ ಶ್ರೀ. ಪಿ ಸಿ ಜಾರ್ಜ್ ಮತ್ತು ಠಾಣೆಯ ಸಿಬ್ಬಂದಿಗಳು ಅಗ್ನಿ ಸುರಕ್ಷತಾ ಸಾಧನಗಳ ಪ್ರಾಯೋಗಿಕ ಪ್ರಾತ್ಯಕ್ಷಿಕೆ ನೀಡಿದರು. ವಿವಿಧ ಬಗೆಯ ಸಿಲಿಂಡರ್, ಸ್ಪ್ರೇಯರ್ ಮತ್ತು ರಾಸಾಯನಿಕಗಳನ್ನು ಅಗ್ನಿ ಶಮನದಲ್ಲಿ ಬಳಸುವ ವಿಧಾನ ಹಾಗೂ ಅಗ್ನಿಶಾಮಕ ವಾಹನದ ಕಾರ್ಯ ವೈಖರಿಯನ್ನು ಈ ಸಂದರ್ಭದಲ್ಲಿ ತೋರಿಸಲಾಯಿತು.

ಕೊನೆಯ ವರ್ಷದ 30ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಮಹಾವಿದ್ಯಾಲಯದ ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ. ಮಂಜುನಾಥ ಡಿ, ಇಲೆಕ್ಟ್ರಿಕಲ್ ವಿಭಾಗ ಮುಖ್ಯಸ್ಥರಾದ ಪ್ರೊ. ಎ. ವಿ ಕೊಳಕಿ, ಪ್ರೊ. ಎಸ್.ಎಮ್ ಇನಾಮದಾರ್, ಪ್ರೊ. ವರಪ್ರಸಾದ ಗಾಂವ್ಕರ್ ಮತ್ತು ಪ್ರೊ. ಸುಬ್ರಮಣ್ಯ ಹೆಗಡೆ ಉಪಸ್ಥಿತರಿದ್ದರು ಎಂದು ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


OPPO F11


OPPO F11